# All India Radio: Bangalore
# National Bulletin In Kannada
# 16.04.2026 19.35 p.m.

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

1. ಸಂಸದೀಯ ಪ್ರಜಾಪ್ರಭುತ್ವದಲ್ಲಿ ಮಹಿಳೆಯರ ಭಾಗವಹಿಸುವಿಕೆ ಮೌಲ್ಯಗಳಿಗೆ ಬದ್ಧವಾಗಿರಬೇಕು: ಪ್ರಧಾನಿ ಮೋದಿ ಅಭಿಮತ
2. ಪ್ರತಿಯೊಬ್ಬರು ಇತರ ಭಾಷೆಗಳನ್ನು ಕಲಿಯಬೇಕು, ಆದರೆ ಮಾತೃಭಾಷೆಯನ್ನು ಮರೆಯಬಾರದು _ ರಾಷ್ಟ್ರಪತಿ ದ್ರೌಪದಿ ಮುರ್ಮು
3. ಮಹಾರಾಷ್ಟ್ರ ವಿಧಾನ ಪರಿಷತ್ತಿನ ೯ ಸ್ಥಾನಗಳಿಗೆ ವೇಳಾಪಟ್ಟಿ ಪ್ರಕಟಿಸಿದ ಚುನಾವಣಾ ಆಯೋಗ
4. ಐಪಿಎಲ್ ಟಿ-೨೦ ಕ್ರಿಕೆಟ್: ಮುಂಬೈ ವಿರುದ್ಧ ಟಾಸ್ ಗೆದ್ದ ಪಂಜಾಬ್ ಕಿಂಗ್ಸ್ ಫೀಲ್ಡಿಂಗ್ ಆಯ್ಕೆ

<><><><>

ಮಹಿಳಾ ಮೀಸಲಾತಿ ಮಸೂದೆಯ ಕುರಿತು ಪ್ರಧಾನಿ ನರೇಂದ್ರ ಮೋದಿ ಅವರು ಇಂದು ಲೋಕಸಭೆಯಲ್ಲಿ ಚರ್ಚೆ ನಡೆಸಿದರು. ಮೂರು ದಿನಗಳ ವಿಶೇಷ ಅಧಿವೇಶನದೊಂದಿಗೆ ವಿಸ್ತರಿಸಲ್ಪಟ್ಟ ಬಜೆಟ್ ಅಧಿವೇಶನವು ಇಂದು ಆರಂಭವಾಯಿತು. ಲೋಕಸಭೆಯಲ್ಲಿ ನಾರಿಶಕ್ತಿ ವಂದನಾ ಅಧಿನಿಯಮಕ್ಕೆ ಸಂಬಂಧಿಸಿದಂತೆ, ಸಂವಿಧಾನದ ೧೩೧ನೇ ತಿದ್ದುಪಡಿ ಮಸೂದೆ, ಕ್ಷೇತ್ರ ಪುನರ್ವಿಂಗಡಣೆ ಮಸೂದೆ ೨೦೨೬, ಮತ್ತು ಕೇಂದ್ರಾಡಳಿತ ಪ್ರದೇಶಗಳ ಕಾನೂನು ತಿದ್ದುಪಡಿ ಮಸೂದೆ ೨೦೨೬ ಮಸೂದೆಗಳನ್ನು ಕುರಿತ ಚರ್ಚೆಯಲ್ಲಿ ಪ್ರಧಾನಿ ಭಾಗವಹಿಸಿ ಮಾತನಾಡಿದರು. ದೇಶದ ಅಭಿವೃದ್ಧಿಯಲ್ಲಿ ನಾರಿಶಕ್ತಿ ಪ್ರಮುಖ ಪಾತ್ರ ವಹಿಸುತ್ತದೆ ಮತ್ತು ನೀತಿ ನಿರೂಪಣೆಯಲ್ಲಿ ಅವರಿಗೆ ಸೂಕ್ತ ಪ್ರಾತಿನಿಧ್ಯ ನೀಡುವುದು ಇಂದಿನ ಅಗತ್ಯವಾಗಿದೆ. ದೇಶದ ಸಂಸದೀಯ ಪ್ರಜಾಪ್ರಭುತ್ವದಲ್ಲಿ ಮಹಿಳೆಯರ ಭಾಗವಹಿಸುವಿಕೆ ಕೇವಲ ಸಂಖ್ಯೆಗಳ ಬಗ್ಗೆ ಮಾತ್ರವಲ್ಲ. ಪ್ರಜಾಪ್ರಭುತ್ವ ಮೌಲ್ಯಗಳಿಗೆ ಬದ್ಧತೆಯಾಗಿದೆ. ಸುಮಾರು ೬ ಸಾವಿರದ ೭೦೦ ಬ್ಲಾಕ್ ಪಂಚಾಯತ್‌ಗಳಲ್ಲಿ ಸುಮಾರು ೨ ಸಾವಿರದ ೭೦೦ ಪಂಚಾಯತ್‌ಗಳನ್ನು ಮಹಿಳೆಯರು ಮುನ್ನಡೆಸುತ್ತಿದ್ದಾರೆ ಎಂದು ಅವರು ತಿಳಿಸಿದರು. ಈ ಐತಿಹಾಸಿಕ ಶಾಸನವು ದೇಶದ ದಿಕ್ಕು ಮತ್ತು ಭವಿಷ್ಯವನ್ನು ರೂಪಿಸುವಲ್ಲಿ ನಿರ್ಣಾಯಕ ಪಾತ್ರ ವಹಿಸುತ್ತದೆ. ಇದಕ್ಕೆ ರಾಜಕೀಯ ಬಣ್ಣ ನೀಡಬೇಡಿ ಎಂದು ವಿರೋಧ ಪಕ್ಷಗಳಿಗೆ ಪ್ರಧಾನಿ ಮನವಿ ಮಾಡಿದರು. ಈಗ ಈ ಶಾಸನವನ್ನು ವಿರೋಧಿಸಿದರೆ ಭವಿಷ್ಯದಲ್ಲಿ ಅದರ ಪರಿಣಾಮಗಳನ್ನು ಎದುರಿಸಬೇಕಾಗುತ್ತದೆ ಎಂದು ಅವರು ಎಚ್ಚರಿಸಿದರು. ಈ ಶಾಸನವನ್ನು ಕುರಿತ ಚರ್ಚೆಯನ್ನು ಪ್ರಾರಂಭಿಸಿದ ಕಾಂಗ್ರೆಸ್ ಸಂಸದ ಗೌರವ್ ಗೊಗೊಯ್ ತಮ್ಮ ಪಕ್ಷವು ಮಹಿಳಾ ಮೀಸಲಾತಿಯ ಪರವಾಗಿದೆ. ಆದರೆ ಅದನ್ನು ಸರಳೀಕರಿಸಬೇಕು ಮತ್ತು ಸೀಮಾ ನಿರ್ಣಯದೊಂದಿಗೆ ಸಂಬಂಧಿಸಬಾರದು ಎಂದು ಹೇಳಿದರು. ಚರ್ಚೆಯಲ್ಲಿ ಭಾಗವಹಿಸಿದ ಸಮಾಜವಾದಿ ಪಕ್ಷದ ಸಂಸದ ಅಖಿಲೇಶ್ ಯಾದವ್ ತಮ್ಮ ಪಕ್ಷವು ಮಹಿಳಾ ಮೀಸಲಾತಿಯನ್ನು ಬೆಂಬಲಿಸುತ್ತದೆ ಎಂದು ಹೇಳಿದರು. ಆದಾಗ್ಯು ಇಂತಹ ಮಹತ್ವದ ಶಾಸನವನ್ನು ಆತುರದಿಂದ ತರಬೇಕೆ ಎಂದು ಸರ್ಕಾರವನ್ನು ಪ್ರಶ್ನಿಸಿದರು.

<><><><>

ಮಹಿಳಾ ಮೀಸಲಾತಿ ಮಸೂದೆಯು ಮಹಿಳೆಯರ ಸಾಮರ್ಥ್ಯವನ್ನು ಗುರುತಿಸುವ ಮತ್ತು ಅವರನ್ನು ಗೌರವಿಸುವ ಒಂದು ಹೆಜ್ಜೆಯಾಗಿದ್ದು, ಈ ಮಸೂದೆಯು ಜಾರಿಯಾಗಿರುವುದು ದೇಶಾದ್ಯಂತ ಮಹಿಳೆಯರಿಗೆ ಇಂದು ಮಹತ್ವದ ದಿನವಾಗಿದೆ ಎಂದು ಬಿಜೆಪಿ ಸಂಸದೆ ಹೇಮಾಮಾಲಿನಿ ಸಂತಸ ವ್ಯಕ್ತಪಡಿಸಿದ್ದಾರೆ. ತಮಿಳುನಾಡಿನ ಕಾಂಗ್ರೆಸ್ ಸಂಸದೆ ಜ್ಯೋತಿಮಣಿ ಸೆನ್ನಿಮಲೈ ೨೦೧೧ರ ಜನಗಣತಿ ಆಧಾರಿತ ಕ್ಷೇತ್ರ ಪುನರ್ ವಿಂಗಡಣೆ ನಡೆಸಲು ಬಿಜೆಪಿಯು ಈ ಮಸೂದೆಯನ್ನು ಗುರಾಣಿಯಾಗಿ ಬಳಸುತ್ತಿದೆ ಎಂದು ಆರೋಪಿಸಿದರು. ಡಿಲಿಮಿಟೇಷನ್ ಮಸೂದೆಯು ದಕ್ಷಿಣ ಭಾರತದ ವಿರುದ್ಧವಾಗಿದ್ದು, ಇದು ಈ ದೇಶದ ಏಕತೆ ಮತ್ತು ರಾಜಕೀಯ ಸಮಗ್ರತೆಯನ್ನು ನಾಶಪಡಿಸುತ್ತದೆ ಎಂದು ಅವರು ಅಭಿಪ್ರಾಯಪಟ್ಟಿದ್ದಾರೆ.

<><><><>

ಪ್ರತಿಯೊಬ್ಬರೂ ಇತರ ಭಾಷೆಗಳನ್ನು ಕಲಿಯಬೇಕು, ಆದರೆ ತಮ್ಮ ಮಾತೃಭಾಷೆಯನ್ನು ಮರೆಯಬಾರದು. ಪ್ರತಿಯೊಬ್ಬರೂ ತಮ್ಮ ಭಾಷೆಯನ್ನು ಯಾವಾಗಲೂ ಮುಂಚೂಣಿಯಲ್ಲಿಡಬೇಕು ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಅಭಿಪ್ರಾಯಪಟ್ಟಿದ್ದಾರೆ. ಮಹಾರಾಷ್ಟ್ರದ ವರ್ಧಾದಲ್ಲಿರುವ ಮಹಾತ್ಮ ಗಾಂಧಿ ಅಂತಾರಾಷ್ಟ್ರೀಯ ಹಿಂದಿ ವಿಶ್ವವಿದ್ಯಾಲಯದ ೬ನೇ ಘಟಿಕೋತ್ಸವ ಸಮಾರಂಭ ಉದ್ದೇಶಿಸಿ ಮಾತನಾಡಿದ ಅವರು, ರಾಷ್ಟ್ರ ನಿರ್ಮಾಣದಲ್ಲಿ ಭಾರತೀಯ ಭಾಷೆಗಳ ಪ್ರಾಮುಖ್ಯತೆಯನ್ನು ಒತ್ತಿ ಹೇಳಿದ್ದಾರೆ. "ನಾವು ಬಲಿಷ್ಠ, ಸ್ವಾವಲಂಬಿ ಮತ್ತು ಅಭಿವೃದ್ಧಿ ಹೊಂದಿದ ಭಾರತವನ್ನು ನಿರ್ಮಿಸಬೇಕು ಮತ್ತು ಇದು ಭಾರತೀಯ ಭಾಷೆಗಳ ಅಡಿಪಾಯದ ಮೇಲೆ ಮಾತ್ರ ಸಾಧ್ಯ" ಎಂದು ತಿಳಿಸಿದ್ದಾರೆ. 'ರಾಷ್ಟ್ರೀಯ ಶಿಕ್ಷಣ ನೀತಿ' ಸೇರಿದಂತೆ ಹಲವಾರು ಉಪಕ್ರಮಗಳ ಶಕ್ತಿಯೊಂದಿಗೆ ನಮ್ಮ ದೇಶವು ಸರಿಯಾದ ದಿಕ್ಕಿನಲ್ಲಿ ಸಾಗುತ್ತಿದೆ ಎಂದು ಅವರು ತಿಳಿಸಿದರು. ಮಹಾತ್ಮ ಗಾಂಧಿ, ನೇತಾಜಿ ಸುಭಾಷ್ ಚಂದ್ರ ಬೋಸ್ ಮತ್ತು ಕಾಕಾ ಕಾಲೇಲ್ಕರ್ ಅವರು 'ರಾಷ್ಟ್ರಭಾಷಾ ಪ್ರಚಾರ ಸಮಿತಿ'ಯನ್ನು ಸ್ಥಾಪಿಸಿದ್ದು ಇದೇ ವರ್ಧಾದಲ್ಲಿ ಎಂಬ ವಿಷಯವನ್ನು ಅವರು ಈ ಸಂದರ್ಭದಲ್ಲಿ ಸ್ಮರಿಸಿದರು. ಇದಕ್ಕೂ ಮುನ್ನ ಅವರು, ವರ್ಧಾದ ಸೇವಾಗ್ರಾಮ ಆಶ್ರಮಕ್ಕೆ ಭೇಟಿ ನೀಡಿದ್ದರು.

<><><><>

ಮಹಾರಾಷ್ಟ್ರ ವಿಧಾನ ಪರಿಷತ್ತಿನ ೯ ಸ್ಥಾನಗಳಿಗೆ ದ್ವೈವಾರ್ಷಿಕ ಚುನಾವಣೆಗಳು ಮೇ ೧೨ರಂದು ನಡೆಯಲಿವೆ ಎಂದು ಚುನಾವಣಾ ಆಯೋಗ ಪ್ರಕಟಿಸಿದೆ. ವೇಳಾಪಟ್ಟಿಯ ಪ್ರಕಾರ ಈ ತಿಂಗಳ ೨೩ರಂದು ಅಧಿಸೂಚನೆ ಹೊರ ಬೀಳಲಿದ್ದು, ನಾಮಪತ್ರ ಸಲ್ಲಿಸಲು ೩೦ನೇ ತಾರೀಖು ಕೊನೆಯ ದಿನವಾಗಿದೆ. ಮೇ ೨ರಂದು ನಾಮಪತ್ರ ಪರಿಶೀಲನೆ ನಡೆಯಲಿದ್ದು, ಮೇ ೪ರೊಳಗೆ ಅಭ್ಯರ್ಥಿಗಳು ತಮ್ಮ ನಾಮಪತ್ರಗಳನ್ನು ಹಿಂಪಡೆಯಬಹುದಾಗಿದೆ. ಮೇ ೧೨ರಂದು ಬೆಳಗ್ಗೆ ೯ ರಿಂದ ಸಂಜೆ ೪ರವರೆಗೆ ಮತದಾನ ನಡೆಯಲಿದ್ದು, ಅದೇ ಸಂಜೆ ೫ ಗಂಟೆಗೆ ಮತ ಎಣಿಕೆ ಪ್ರಾರಂಭವಾಗುವ ನಿರೀಕ್ಷೆಯಿದೆ. ೨೮೮ ಸದಸ್ಯ ಬಲದ ಮಹಾರಾಷ್ಟ್ರ ವಿಧಾನಸಭೆಯ ಸದಸ್ಯರು ೨೦೨೬ರ ಮೇ ನಲ್ಲಿ ನಿವೃತ್ತರಾಗುವ ಸದಸ್ಯರ ಸ್ಥಾನಗಳನ್ನು ಭರ್ತಿಗೊಳಿಸಲು ಈ ಚುನಾವಣೆಗಳು ನಡೆಯಲಿವೆ.

<><><><>

ತಮಿಳುನಾಡಿನ ಕಲ್ಪಾಕಂ ನಲ್ಲಿರುವ ಸ್ಥಳೀಯವಾಗಿ ವಿನ್ಯಾಸಗೊಳಿಸಿ ನಿರ್ಮಿಸಲಾದ ಮೂಲ ಮಾದರಿ ಫಾಸ್ಟ್ ಬ್ರೀಡರ್ ಪರಮಾಣು ರಿಯಾಕ್ಟರ್ ಕಾರ್ಯ ಸಾಧ್ಯತೆಯನ್ನು ತಲುಪಿದ್ದು, ಭಾರತದ ಪರಮಾಣು ಇಂಧನ ಕಾರ್ಯಕ್ರಮದಲ್ಲಿನ ಮೈಲಿಗಲ್ಲನ್ನು ಲೋಕಸಭೆ ಇಂದು ಶ್ಲಾಘಿಸಿದೆ. ಭಾರತದ ವೈಜ್ಞಾನಿಕ ಪ್ರಗತಿ ಮತ್ತು ತಾಂತ್ರಿಕ ಸ್ವಾವಲಂಬನೆ ಪ್ರಯಾಣದಲ್ಲಿ ಇದು ಮಹತ್ವದ ಸಾಧನೆಯಾಗಿದೆ ಎಂದು ಲೋಕಸಭಾ ಸ್ಪೀಕರ್ ಓಂ ಬಿರ್ಲಾ ಪ್ರತಿಕ್ರಿಯಿಸಿದ್ದಾರೆ. ಇದೇ ತಿಂಗಳ ೬ರಂದು ೫೦೦ ಮೆಗಾವ್ಯಾಟ್ ವಿದ್ಯುತ್ ಮೂಲಮಾದರಿ ಫಾಸ್ಟ್ ಬ್ರೀಡರ್ ರಿಯಾಕ್ಟರ್ ಯಶಸ್ವಿಯಾಗಿ ತನ್ನ ಮೊದಲ ಕಾರ್ಯವನ್ನು ನಿರ್ವಹಿಸಿದೆ. ಇದು ಕೇವಲ ತಾಂತ್ರಿಕ ಸಾಧನೆಯಲ್ಲ, ಆದರೆ ಪ್ರಮುಖ ರಾಷ್ಟ್ರೀಯ ಸಾಧನೆ ಮತ್ತು ಸಾವಿರಾರು ವಿಜ್ಞಾನಿಗಳು, ಇಂಜಿನಿಯರ್‌ಗಳ ನಿರಂತರ ಪ್ರಯತ್ನದ ಫಲವಾಗಿದೆ ಎಂದು ಅವರು ಹೇಳಿದರು. ಈ ಐತಿಹಾಸಿಕ ಮೈಲಿಗಲ್ಲು ಪರಮಾಣು ಇಂಧನ ಮಿಷನ್‌ಗೆ ಉತ್ತೇಜನ ನೀಡಿದೆ. ೨೦೭೦ರ ವೇಳೆಗೆ ನಿವ್ವಳ ಶೂನ್ಯ ಹೊರಸೂಸುವಿಕೆಯನ್ನು ಸಾಧಿಸುವ ಭಾರತದ ಜಾಗತಿಕ ಬದ್ಧತೆಯನ್ನು ಬಲಪಡಿಸಿದೆ ಎಂದು ಇದೇ ಸಂದರ್ಭದಲಿ ಲೋಕಸಭಾಧ್ಯಕ್ಷ ಓಂ ಬಿರ್ಲಾ ತಿಳಿಸಿದರು.

<><><><>

ಉಕ್ರೇನ್‌ನ ನಾಗರಿಕ ಪ್ರದೇಶಗಳ ಮೇಲೆ ರಷ್ಯಾ ರಾತ್ರೋರಾತ್ರಿ ನೂರಾರು ಡ್ರೋನ್‌ಗಳು ಮತ್ತು ಕ್ಷಿಪಣಿಗಳನ್ನು ಬಳಸಿ ದಾಳಿ ನಡೆಸಿದ್ದು, ಸುಮಾರು ೨ ವಾರಗಳಲ್ಲಿ ನಡೆದ ಅತಿದೊಡ್ಡ ವೈಮಾನಿಕ ದಾಳಿ ಇದಾಗಿದೆ. ಈ ದಾಳಿಯಲ್ಲಿ ಕನಿಷ್ಠ ೧೦ ಜನರು ಸಾವನ್ನಪ್ಪಿದ್ದು, ೮೦ಕ್ಕೂ ಹೆಚ್ಚು ಜನರು ಗಾಯಗೊಂಡಿದ್ದಾರೆ ಎಂದು ವರದಿಯಾಗಿದೆ. ರಷ್ಯಾ ಸುಮಾರು ೭೦೦ ಡ್ರೋನ್‌ಗಳು ಮತ್ತು ಡಜೆನ್‌ಗಟ್ಟಲೆ ಬ್ಯಾಲಿಸ್ಟಿಕ್ ಮತ್ತು ಕ್ರೂಜ್ ಕ್ಷಿಪಣಿಗಳನ್ನು ಉಡಾಯಿಸಿದ್ದು, ಪ್ರಾಥಮಿಕವಾಗಿ ನಾಗರಿಕರನ್ನು ಗುರಿಯಾಗಿಸಿಕೊಂಡ ದಾಳಿ ಇದಾಗಿದೆ

ಎಂದು ಉಕ್ರೇನ್‌ನ ವಿದೇಶಾಂಗ ಸಚಿವ ಆಂಡ್ರಿ ಸಿಬಿಹಾ ಸಾಮಾಜಿಕ ಮಾಧ್ಯಮದಲ್ಲಿ ತಿಳಿಸಿದ್ದಾರೆ. ಉಕ್ರೇನ್‌ನ ವಾಯುಪಡೆಯು ೭೦೩ ಗುರಿಗಳ ಪೈಕಿ ೬೬೭ ಒಳನುಸುಳುವ ಗುರಿಗಳನ್ನು ಹೊಡೆದುರುಳಿಸಿದೆ ಎಂದು ವರದಿಯಾಗಿದೆ.

<><><><>

ಪ್ರಧಾನಿ ನರೇಂದ್ರ ಮೋದಿ ನವದೆಹಲಿಯಲ್ಲಿಂದು ಆಸ್ಟ್ರಿಯಾದ ಚಾನ್ಸೆಲರ್ ಡಾ.ಕ್ರಿಶ್ಚಿಯನ್ ಸ್ಟಾಕರ್ ಅವರೊಂದಿಗೆ ಮಾತುಕತೆ ನಡೆಸಿದರು. ಸಭೆಯಲ್ಲಿ ಭಾರತ ಮತ್ತು ಆಸ್ಟ್ರಿಯಾ ಆಹಾರ ಸುರಕ್ಷತೆ, ಸಹಕಾರ ಮತ್ತು ಮಿಲಿಟರಿ ವಿಷಯಗಳು ಮತ್ತು ಭಯೋತ್ಪಾದನೆ ನಿಗ್ರಹ ಕುರಿತಂತೆ ಜಂಟಿ ಕಾರ್ಯಕಾರಿ ಗುಂಪಿನ ಕುರಿತಾದ ಒಪ್ಪಂದ ಸೇರಿದಂತೆ ಹಲವಾರು ದಾಖಲೆಗಳನ್ನು ವಿನಿಮಯ ಮಾಡಿಕೊಂಡರು. ಜಂಟಿ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಪ್ರಧಾನಿ, ಮೂಲಸೌಕರ್ಯ, ನಾವಿನ್ಯತೆ ಮತ್ತು ಸುಸ್ಥಿರತೆಯಲ್ಲಿ ಭಾರತ ಮತ್ತು ಆಸ್ಟ್ರಿಯಾ ವಿಶ್ವಾಸಾರ್ಹ ಪಾಲುದಾರರಾಗಿದ್ದಾರೆ ಎಂದು ಹೇಳಿದರು. ಯೂರೋಪ್‌ನ ಹೊರಗೆ ತಮ್ಮ ಮೊದಲ ಪ್ರವಾಸಕ್ಕಾಗಿ ಸ್ಟಾಕರ್ ಅವರು, ಭಾರತವನ್ನು ಆಯ್ಕೆ ಮಾಡಿಕೊಂಡಿದ್ದಕ್ಕಾಗಿ ಪ್ರಧಾನಿ ಸಂತಸ ವ್ಯಕ್ತಪಡಿಸಿದರು. ಇದು ಸ್ಟಾಕರ್ ಅವರ ಉಭಯ ದೇಶಗಳ ನಡುವಿನ ಸಂಬಂಧಗಳೆಡೆಗೆ ಅವರ ಬದ್ಧತೆಯನ್ನು ಪ್ರತಿಬಿಂಬಿಸುತ್ತದೆ ಹಾಗೂ ತಮ್ಮ ಭೇಟಿಯು ಎರಡೂ ರಾಷ್ಟ್ರಗಳ ನಡುವಿನ ವ್ಯಾಪಾರ ಮತ್ತು ಹೂಡಿಕೆಯನ್ನು ಹೆಚ್ಚಿಸುತ್ತದೆ ಎಂದು ಪ್ರಧಾನಿ ಅಭಿಪ್ರಾಯಪಟ್ಟಿದ್ದಾರೆ.

<><><><>

ರಷ್ಯಾ ಮತ್ತು ಇರಾನಿನ ಕಚ್ಚಾತೈಲದ ಮೇಲಿನ ನಿರ್ಬಂಧಗಳ ವಿನಾಯಿತಿಯನ್ನು ನವೀಕರಿಸುವುದಿಲ್ಲ ಎಂದು ಅಮೆರಿಕ ಹೇಳಿಕೆ ನೀಡಿದ ನಂತರ ಇಂದು ಜಾಗತಿಕ ಕಚ್ಚಾತೈಲ ಬೆಲೆಗಳು ಏರಿಕೆಯಾಗಿವೆ. ಇತ್ತೀಚಿನ ವರದಿ ಬಂದಾಗ ಬ್ರೆಂಟ್ ಕಚ್ಚಾತೈಲು ಬ್ಯಾರೆಲ್‌ಗೆ ಶೇಕಡ ೦.೮ ರಷ್ಟು ಏರಿಕೆಯಾಗಿ ೯೫ ಅಮೆರಿಕನ್ ಡಾಲರ್, ೭೫ ಸೆಂಟ್‌ಗಳಲ್ಲಿ ವಹಿವಾಟು ನಡೆಸುತ್ತಿದೆ. ವೆಸ್ಟ್ ಟೆಕ್ಸಾಸ್ ಇಂಟರ್ ಮಿಡಿಯೇಟ್ ಕಚ್ಚಾತೈಲವು ಬ್ಯಾರೆಲ್‌ಗೆ ಶೇಕಡ ೦.೨ ರಷ್ಟು ಏರಿಕೆಯಾಗಿ ೯೧ ಡಾಲರ್ ೪೫ ಸೆಂಟ್‌ಗಳಲ್ಲಿ ವಹಿವಾಟು ನಡೆಸುತ್ತಿದೆ.

<><><><>

ಮುಂಬೈನ ವಾಂಖೆಡೆ ಕ್ರೀಡಾಂಗಣದಲ್ಲಿ ಇಂದು ನಡೆಯುತ್ತಿರುವ ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ಮುಂಬೈ ಇಂಡಿಯನ್ಸ್, ಪಂಜಾಬ್ ಕಿಂಗ್ಸ್ ಮುಖಾಮುಖಿಯಾಗಿವೆ. ಮೊದಲು ಟಾಸ್ ಗೆದ್ದ ಪಂಜಾಬ್ ಕಿಂಗ್ಸ್ ತಂಡ ಫೀಲ್ಡಿಂಗ್ ಆಯ್ಕೆ ಮಾಡಿಕೊಂಡಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>